ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಗುಲ್ಬರ್ಗಾ ಜಿಲ್ಲೆಯ ಬೇಲೂರು ಗ್ರಾಮದಲ್ಲಿರುವ ಕಲ್ಲು ಗಣಿಗಾರಿಕೆಯ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

97 (842) ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಗುಲ್ಬರ್ಗಾ ಜಿಲ್ಲೆ ಬೇಲೂರು ಗ್ರಾಮದಲ್ಲಿ ಕಲ್ಲು ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಆ) ಗ್ರಾಮದ ಸರಹದ್ದು 500 ಮೀಟರ್ ಅಂತರದಲ್ಲಿ ಡೈನಾಮೆಟ್ ಸ್ಫೋಟ ಮಾಡುತ್ತಿದ್ದು, ಇದರಿಂದ ಗ್ರಾಮದ ಮನೆಗಳಿಗೆ ಹಾನಿಯಾಗುತ್ತಿದ್ದು, ಜನರಿಗೆ ಆರೋಗ್ಯ ಸಮಸ್ಯೆ ಕಾಡುತ್ತಿದ್ದು, ಈ ಬಗ್ಗೆ ಜಿಲ್ಲಾಡಳಿತ ಯಾವ ಕ್ರಮ ಕೈಗೊಂಡಿದೆ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಗಣಿಗಾರಿಕೆಗಾಗಿ ಈತನಕ ಎಷ್ಟು ಪರವಾನಿಗೆ ನೀಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಈ) ರಾಜ್ಯದಲ್ಲಿ ಹಲವಾರು ಕಡೆ ಅಕ್ರಮವಾಗಿ ಗಣಿಗಾರಿಕೆ ನಡೆಯುತ್ತಿದ್ದು, ಈ ಅಕ್ರಮ ಗಣಿಗಾರಿಕೆಯನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ಒದಗಿಸುವುದು)